**ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯದಲ್ಲಿ, ಅಂಕೋಲಾ.**

ಸಿಸಿ ನಂಬರ 172/2025

ಫಿರ್ಯಾದಿ - ವಿರುದ್ಧ - ಆರೋಪಿ

ಅಂಕೋಲಾ ಪೊಲೀಸ ಠಾಣೆ

ಸಂದೇಶ ನಾಗೇಶ ಮೇತ್ರಿ
ಪ್ರಾಯಃ 24 ವರ್ಷ, ವಿದ್ಯಾರ್ಥಿ,
ಸಾಃ ಆವರ್ಸಾ ತಾರೀಬೋಲೆ,
ತಾಃ ಅಂಕೋಲಾ

**ಆಪಾದನೆ**

ದಿನಾಂಕಃ 26-06-2024 ರಂದು ಮಧ್ಯಾಹ್ನ 3.00 ಗಂಟೆಗೆ ಅಂಕೋಲಾ ಪೊಲೀಸ ಠಾಣಾ ವ್ಯಾಪ್ತಿಯಲ್ಲಿ ಬರುವ ಅಂಕೋಲಾ ತಾಲೂಕಿನ ಹಟ್ಟಿಕೇರಿಯಲ್ಲಿ ಹಾಯ್ದಿರುವ ಚತುಷ್ಪಥ ರಾಷ್ಟ್ರೀಯ ಹೆದ್ದಾರಿ 66 ಡಾಂಬರ ರಸ್ತೆಯಲ್ಲಿ ಆರೋಪಿಯಾದ ನೀವು ಮೋಟಾರ ಸೈಕಲ್ ಚಾಲನಾ ಪರವಾನಿಗೆ ಪತ್ರ ಹೊಂದಿರದೆ ಇದ್ದರೂ ನೋಂದಣಿ ಅವಧಿ ಮುಗಿದ ಹಾಗೂ ವಿಮೆ ಇಲ್ಲದ ಹಿರೋಹೊಂಡಾ ಕಂಪನಿಯ ಸಿಡಿ -100 ಮೋಟಾರ ಸೈಕಲ್ ನಂ. ಕೆಎ-30/ಜೆ-2356 ನೇದರ ಹಿಂಬದಿ ಸೀಟಿನಲ್ಲಿ ಚಾಸಾ -8 ವೀಕ್ಷಿತ ವೆಂಕದಾಸ ನಾಯ್ಕ ಈತನಿಗೆ ಕೂರಿಸಿಕೊಂಡು ನೀವು ನಿಮ್ಮ ಮೋಟಾರ ಸೈಕಲನ್ನು ಕಾರವಾರ ಕಡೆಯಿಂದ ಅಂಕೋಲಾ ಕಡೆಗೆ ಅತೀ ವೇಗ ಹಾಗೂ ಅಜಾಗರೂಕತೆಯಿಂದ ಚಲಾಯಿಸಿಕೊಂಡು ಹೋದವನು ಹಟ್ಟಿಕೇರಿಯ ಬಾಬು ಗ್ಯಾರೇಜ್ ಹತ್ತಿರ ನಿಮ್ಮ ಮೋಟಾರ ಸೈಕಲ್ ಚಾಲನೆಯ ಮೇಲೆ ನಿಯಂತ್ರಣವನ್ನು ಕಳೆದುಕೊಂಡು ಚತುಷ್ಪಥ ರಾಷ್ಟ್ರೀಯ ಹೆದ್ದಾರಿ 66 ರಸ್ತೆಯ ಬದಿಯಲ್ಲಿ ನಡೆದುಕೊಂಡು ಹೋಗುತ್ತಿದ್ದ ಪಾದಚಾರಿ ಗೇನು ತಂ ಶೇಷು ನಾಯ್ಕ ಇವರಿಗೆ ಹಿಂದಿನಿಂದ ಡಿಕ್ಕಿ ಹೊಡೆದು ಅಪಘಾತಪಡಿಸಿ ಆ ಮೂಲಕ ಭಾರತ ದಂಡ ಸಂಹಿತೆ ಕಲಂ. 279 ರಡಿಯಲ್ಲಿ ನನ್ನ ಸಂಜ್ಞೆಯ ವ್ಯಾಪ್ತಿಯಲ್ಲಿ ಅಪರಾಧ ಮಾಡಿರುತ್ತೀರಿ ಅಂತಾ ನಿಮ್ಮ ಮೇಲೆ ಆಪಾದನೆ ಇರುತ್ತದೆ.

ಎರಡನೇಯದಾಗಿ, ಮೇಲೆ ಹೇಳಿದ ದಿನ, ಸ್ಥಳ ಮತ್ತು ಸಮಯದಂದು ಆರೋಪಿಯಾದ ನೀವು ಅಪಘಾತಪಡಿಸಿ ಗೇನು ಶೇಷು ನಾಯ್ಕು ಇವರಿಗೆ ರಸ್ತೆಯ ಮೇಲೆ ಬಿಳಿಸಿ, ಅವರಿಗೆ ತಲೆಗೆ ಗಂಭೀರ ಸ್ವರೂಪದ ಗಾಯನೋವುಪಡಿಸಿ ಆ ಮೂಲಕ ಭಾರತ ದಂಡ ಸಂಹಿತೆ ಕಲಂ. 338 ರಡಿಯಲ್ಲಿ ನನ್ನ ಸಂಜ್ಞೆಯ ವ್ಯಾಪ್ತಿಯಲ್ಲಿ ಅಪರಾಧ ಮಾಡಿರುತ್ತೀರಿ ಅಂತಾ ನಿಮ್ಮ ಮೇಲೆ ಆಪಾದನೆ ಇರುತ್ತದೆ.

ಮೂರನೇಯದಾಗಿ, ಮೇಲೆ ಹೇಳಿದ ದಿನ, ಸ್ಥಳ ಮತ್ತು ಸಮಯದಂದು ಆರೋಪಿಯಾದ ನೀವು ಅಪಘಾತಪಡಿಸಿ ಮೋಟಾರ ಸೈಕಲನ್ನು ರಸ್ತೆಯ ಮೇಲೆ ಬೀಳಿಸಿ ಹಿಂಬದಿ ಸವಾರ ಚಾಸಾ –8 ವೀಕ್ಷಿತ ವೆಂಕಟದಾಸ ನಾಯ್ಕು ಈತನಿಗೆ ಹಣೆಗೆ, ಬಲಕೈಗೆ, ಎಡಕಾಲಿಗೆ ಸಾದಾ ಸ್ವರೂಪದ ಗಾಯನೋವುಪಡಿಸಿ ಆ ಮೂಲಕ ಭಾರತ ದಂಡ ಸಂಹಿತೆ ಕಲಂ. 337 ರಡಿಯಲ್ಲಿ ನನ್ನ ಸಂಜ್ಞೆಯ ವ್ಯಾಪ್ತಿಯಲ್ಲಿ ಅಪರಾಧ ಮಾಡಿರುತ್ತೀರಿ ಅಂತಾ ನಿಮ್ಮ ಮೇಲೆ ಆಪಾದನೆ ಇರುತ್ತದೆ.

ನಾಲ್ಕನೇಯದಾಗಿ, ಮೇಲೆ ಹೇಳಿದ ದಿನ, ಸ್ಥಳ ಮತ್ತು ಸಮಯದಂದು ಆರೋಪಿಯಾದ ನೀವು ಅಪಘಾತಪಡಿಸಿದ್ದರಿಂದ ಗಂಭೀರ ಗಾಯಗೊಂಡ ಗಾಯಾಳು ಗೇನು ಶೇಷು ನಾಯ್ಕು ಈತನು ಚಿಕಿತ್ಸೆ ಫಲಕಾರಿಯಾಗದೇ ಕಾರವಾರ ಜಿಲ್ಲಾ ಸರ್ಕಾರಿ ಆಸ್ಪತ್ರೆಯಲ್ಲಿ ಮರಣವನ್ನುಂಟಾಗುವಂತೆ ಮಾಡಿ ಆ ಮೂಲಕ ಭಾರತೀಯ ದಂಡ ಸಂಹಿತೆ ಕಲಂ 304(ಎ) ರಡಿಯಲ್ಲಿ ನನ್ನ ಸಂಜ್ಞೆಯ ವ್ಯಾಪ್ತಿಯಲ್ಲಿ ಅಪರಾಧ ಮಾಡಿರುತ್ತೀರಿ ಅಂತಾ ನಿಮ್ಮ ಮೇಲೆ ಆಪಾದನೆ ಇರುತ್ತದೆ..

ಐದನೇಯದಾಗಿ, ಮೇಲೆ ಹೇಳಿದ ದಿನ, ಸ್ಥಳ ಹಾಗೂ ಸಮಯದಲ್ಲಿ ಆರೋಪಿಯಾದ ನೀವು ವಾಹನ ಚಾಲನಾ ಪರವಾನಿಗೆ ಪತ್ರ ಹೊಂದಿರದೇ ಮೋಟಾರ್ ಸೈಕಲನ್ನು ಚಲಾಯಿಸಿ ಆ ಮೂಲಕ 3(1) ಸಹಿತ 181 ಐ. ಎಮ್. ವಿ. ಆ್ಯಕ್ಟ್ ರಡಿಯಲ್ಲಿ ನನ್ನ ಸಂಜ್ಞೆಯ ವ್ಯಾಪ್ತಿಯಲ್ಲಿ ಅಪರಾಧ ಮಾಡಿರುತ್ತೀರಿ ಅಂತಾ ನಿಮ್ಮ ಮೇಲೆ ಆಪಾದನೆ ಇರುತ್ತದೆ.

ಆರನೇಯದಾಗಿ, ಮೇಲೆ ಹೇಳಿದ ದಿನ, ಸ್ಥಳ ಹಾಗೂ ಸಮಯದಲ್ಲಿ ಆರೋಪಿಯಾದ ನೀವು ವಿಮೆ ಇಲ್ಲದ ಮೋಟಾರ ಸೈಕಲನ್ನು ಚಲಾಯಿಸಿ ಆ ಮೂಲಕ 196 ಐ. ಎಮ್. ವಿ. ಆಕ್ಟ್ ರಡಿಯಲ್ಲಿ ನನ್ನ ಸಂಜ್ಞೆಯ ವ್ಯಾಪ್ತಿಯಲ್ಲಿ ಅಪರಾಧ ಮಾಡಿರುತ್ತೀರಿ ಅಂತಾ ನಿಮ್ಮ ಮೇಲೆ ಆಪಾದನೆ ಇರುತ್ತದೆ.

ಏಳನೆಯದಾಗಿ, ಮೇಲೆ ಹೇಳಿದ ದಿನ, ಸ್ಥಳ ಹಾಗೂ ಸಮಯದಲ್ಲಿ ಆರೋಪಿಯಾದ ನೀವು ನೋಂದಣಿ ಅವಧಿ ಮುಗಿದ ಮೋಟಾರ್ ಸೈಕಲನ್ನು ಚಲಾಯಿಸಿ ಆ ಮೂಲಕ ಮೋಟಾರ ವಾಹನ ಕಾಯ್ದೆ ಕಲಂ.192 ರಡಿಯಲ್ಲಿ ನನ್ನ ಸಂಜ್ಞೆಯ ವ್ಯಾಪ್ತಿಯಲ್ಲಿ ಅಪರಾಧ ಮಾಡಿರುತ್ತೀರಾ ಅಂತಾ ನಿಮ್ಮ ಮೇಲೆ ಆಪಾದನೆ ಇರುತ್ತದೆ.

ಪ್ರಶ್ನೆಃ 1 ನಿಮಗೆ ತಿಳಿದ ಭಾಷೆಯಲ್ಲಿ ಓದಿ ಹೇಳಲಾದ ಆಪಾದನೆ ಬಗ್ಗೆ ನಿಮಗೆ ಅರ್ಥವಾಯಿತೇ?
ಉತ್ತರಃ

ಪ್ರಶ್ನೆಃ 2 ಮೇಲ್ಕಂಡ ಅಪರಾಧಗಳಿಗೆ ಸಂಬಂಧಪಟ್ಟಂತೆ ತಪ್ಪು ಒಪ್ಪಿಕೊಳ್ಳುತ್ತೀರಿ ಅಥವಾ ವಿಚಾರಣೆ ಆಗಬೇಕು ಅಂತಾ ಬಯಸುತ್ತೀರಿ?
ಉತ್ತರಃ

( ಮೇಲಿನ ಆಪಾದನೆಯನ್ನು ಆರೋಪಿಗೆ ಬಹಿರಂಗ ನ್ಯಾಯಾಲಯದಲ್ಲಿ ಆತನಿಗೆ ತಿಳಿದ ಭಾಷೆಯಲ್ಲಿ ಓದಿ ಹೇಳಿ ತಿಳಿಸಿ ಆತನು ಕೊಟ್ಟ ಉತ್ತರವನ್ನು ಬರೆದುಕೊಳ್ಳಲಾಗಿದೆ ಎಂದು ಈ ಮೂಲಕ ದೃಢೀಕರಿಸುತ್ತೇನೆ)

Sd/-

ದಿನಾಂಕಃ 29-04-2025. ( ಅರ್ಪಿತಾ ಬಿ. ಬೆಲ್ಲದ)

ಅಂಕೋಲಾ ಪ್ರಭಾರ ಪ್ರ ದ ನ್ಯಾದಂ, ಅಂಕೋಲಾ.